**OS 66/2022**
**PW-1**

**<u>ದಿನಾಂಕಃ 02.08.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ವಾದಿ ಪರ ಶ್ರೀ.ಎ ಜಿ ವಕೀಲರಿಂದಃ</u>**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ತಿಳಿದು ಸಹಿ ಮಾಡಿರುತ್ತೇನೆ.

ಎಮ್ ಆರ್ ನಂಬರ್ 8/1998-99 ರ ದೃಡೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-1 ಎಂದು, ಕೂಡ್ಲೂರು ಗ್ರಾಮದ ಸರ್ವೆ ನಂಬರ್ 21 ರ ಪಹಣಿ ಪತ್ರಿಕೆಯ ದೃಡೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ಎರಡು ರಶೀದಿಗಳ ನಕಲುಗಳನ್ನು ಹಾಜರು ಪಡಿಸುತ್ತಿದ್ದು ಅವುಗಳನ್ನು ನಿಪಿ-3 ಮತ್ತು 4 ಎಂದು, ದಿನಾಂಕಃ 21.02.2022 ರ ಸ್ವೀಕೃತಿಯನ್ನು ಹಾಜರು ಪಡಿಸುತ್ತಿದುದ ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

<u>ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಲಯ, ಟಿ ನರಸಿಪುರ